**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1950 /2014**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಕಾಳಯ್ಯ** | ಪ್ರಾಸಾಃ 4 |
| ತಂದೆಯ/ಗಂಡನ ಹೆಸರು | | ಲೇಟ್ ಸಿದ್ದಯ್ಯ | ಚಾಸಾಃ 4 |
| ವಯಸ್ಸು | | 77 ವರ್ಷ | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಹನುಮನುಪುರ | ದಿಃ 12/06/2023 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ಅಮಾನತ್ತು ಮಹಜರ್ ಆಗಿದ್ದು, ಅಮಾನತ್ತು ಮಹಜರ್ ನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಲಗ್ನ ಕುಂಡಲಿ ಮತ್ತು ಫೋಟೋಗಳನ್ನು ನೋಡಿ ಗುರುತಿಸಿಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 05.07.2014 ರಂದು ಕವಲಂದೆ ಪೊಲೀಸ್ ಠಾಣೆಯಲ್ಲಿ ನಾನು, ಚಾಸಾ-1 ಮತ್ತು 5 ರವರು ಹಾಜರಿದ್ದು, ಆರೋಪಿ ಹಾಗು ಚಾಸಾ-1 ರವರ ಮದುವೆಯ 6 ಫೋಟೋಗಳು ಮತ್ತು ಒಂದು ಲಗ್ನ ಕುಂಡಲಿಯನ್ನು ಚಾಸಾ-1 ರವರು ನೀಡಿದ ಮೇರೆಗೆ ನಮ್ಮಗಳ ಸಮಕ್ಷಮ ನಿಪಿ-3 ರಂತೆ ಅಮಾನತ್ತು ಪಂಚನಾಮೆಯನ್ನು ಬೆಳಗ್ಗೆ 9.00 ಗಂಟೆಯಿಂದ 9.30 ರವರೆಗೆ ಜರುಗಿಸಿ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಿನಾಂಕ 04.07.2014 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಆರೋಪಿತರು

ಸೇರಿಕೊಂಡು ಚಾಸಾ-1 ರವರಿಗೆ ಕೈಗಳಿಂದ ಮೈಕೈಗೆ ಹೊಡೆದು ಮಾನಸಿಕವಾಗಿ ಮತ್ತು ದೈಹಿಕವಾಗಿ ಕಿರುಕುಳ ನೀಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 05.07.2014 ರಂದು ಈಗ ನನಗೆ ಓದಿ ಹೇಳಿದಂತೆ "ನಮ್ಮ ಗ್ರಾಮದ -------- ಮಹಜರ್ ಗೆ ಸಹಿ ಮಾಡಿರುತ್ತೇನೆ" ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-11 ಎಂದು ಗುರುತಿಸಲಾಯಿತು. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**